1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆ:7037/2022

ಪಿರ್ಯಾದಿ : ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿ : 1 ಮಹದೇವ ಬಿನ್ ಲೇಟ್ ಕರುಲಿ ಮಾದಯ್ಯ 48 ವರ್ಷ

2 ಶಾಂತಿ ಕೋಂ ಮಹದೇವ 36 ವರ್ಷ

4 ನಾಗಮ್ಮ ಕೋಂ ನಾರಾಯಣ 45 ವರ್ಷ

ಎಲ್ಲರ ವಾಸಃ ಬಿಳುಗಲಿ ಗ್ರಾಮ, ನಂಜನಗೂಡು ತಾ.

## ದೋಷಾರೋಪಣೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., *1*ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕಃ29.04.2022 ರಂದು ಬೆಳಗ್ಗೆ 06.30 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಬಿಳುಗಲಿ ಗ್ರಾಮದ ಚಾಸಾ.1 ರವರು ತಮ್ಮ ಮನೆಯ ಪಕ್ಕದ ಖಾಲಿ ಜಾಗದಲ್ಲಿ ಕಸ ಸುರಿಯುತ್ತಿರುವಾಗ ಆರೋಪಿತರು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1 ನೇ ಆರೋಪಿತರಾದ ನೀವು ಚಾಸಾ.1 ರವರ ಮನೆ ಬಳಿ ಬಂದು ಅವರು ಕಸ ಸುರಿಯುತ್ತಿದ್ದ ಖಾಲಿ ನಿವೇಶನದ ಬಳಿ ಬಂದು ಕಸವನ್ನು ಸುರಿಯುತ್ತಿದ್ದು, ಆಗ ಚಾಸಾ.1 ರವರು 1 ನೇ ಆರೋಪಿತರಾದ ನಿಮಗೆ ಈ ಜಾಗವು ನಮಗೆ ಸೇರಬೇಕಾದದ್ದು, ನೀವು ಏಕೆ ನಮ್ಮ ಜಾಗದಲ್ಲಿ ಕಸ ಸುರಿಯುತ್ತಿದ್ದೀರಿ ಎಂದು ಕೇಳಿದಾಗ, 1 ನೇ ಆರೋಪಿತರಾದ ನೀವು ಚಾಸಾ.1 ರವರಿಗೆ ಬೋಳಿ ಮಗಳೆ, ಸೂಳೆ ಮಗಳೆ ಈ ಜಾಗವು ನಮಗೆ ಸೇರಿದ್ದು ಎಂದು ಅವಾಚ್ಯ ಶಬ್ದಗಳಿಂದ ಬೈದು ಮಹಿಳೆಯ ಘನತೆಗೆ ಕುಂದುಂಟು ಮಾಡುವ ಉದ್ದೇಶದಿಂದ ಅವರನ್ನು ಅವಮಾನಿಸಿರುತ್ತೀರಿ.

ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.509 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1ನೇ ಆರೋಪಿತರಾದ ನೀವು ಚಾಸಾ.1ರವರ ಮೇಲೆ ಅಪರಾಧಿಕ ಬಲಪ್ರಯೋಗ ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆ ಕಲಂ.354 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 1ನೇ ಆರೋಪಿತರಾದ ನೀವು ಚಾಸಾ.1ರವರ ಮುಂದಲೆಯನ್ನು ಹಿಡಿದು ಕೆಳಕ್ಕೆ ಕೆಡವಿಕೊಂಡು ಕೈಗಳಿಂದ ಮೈಕೈಗೆ ಹೊಡೆದಿರುತ್ತೀರಿ ಮತ್ತು 4ನೇ ಆರೋಪಿತರಾದ ನೀವು ಚಾಸಾ.1 ರವರ ಎದೆಗೆ ಕೈಯಿದ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ.323 ಸಹವಾಚಕ ಕಲಂ.34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆ ಪೈಕಿ 2ನೇ ಆರೋಪಿತರಾದ ನೀವು ಚಾಸಾ.1ರವರನ್ನು ತಬ್ಬಿಹಿಡಿದುಕೊಂಡು ಮುಂದೆ ಹೋಗದಂತೆ ತಡೆದು ಅಕ್ರಮ ತಡೆಯನ್ನುಂಟು

ಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 341 ಸಹವಾಚಕ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 16.07.2025 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆ:7037/2022

ಪಿರ್ಯಾದಿ : **ಬಿಳಿಗೆರೆ** ಪೊಲೀಸರು

ವಿರುದ್ಧ

ಆರೋಪಿ :
1 ಮಹದೇವ ಬಿನ್ ಲೇಟ್ ಕರುಲಿ ಮಾದಯ್ಯ 48 ವರ್ಷ
2 ಶಾಂತಿ ಕೋಂ ಮಹದೇವ 36 ವರ್ಷ
4 ನಾಗಮ್ಮ ಕೋಂ ನಾರಾಯಣ 45 ವರ್ಷ
ಎಲ್ಲರ ವಾಸಃ ಬಿಳುಗಲಿ ಗ್ರಾಮ, ನಂಜನಗೂಡು ತಾ.

: ಆಪಾದನೆ :

ಪ್ರಶ್ನೆಃ1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

4 ನೇ ಆರೋಪಿ ಉತ್ತರಃ

ಪ್ರಶ್ನೆಃ2– ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

4 ನೇ ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**